ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

26

ಇಲಾಖೆ / ವಿಷಯ : DEPARTMENT / SUBJECT: ಗಡಿ ವಿವಾದ - ಬೆಳಗಾವಿ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ    ದಿನಾಂಕ : DATE : 16/3/21

# ಬೆಳಗಾವಿ ಗಡಿ ವಿವಾದ: ಸಂಸತ್ತಲ್ಲಿ ಮರಾಠಿ, ಕನ್ನಡ ಸಂಸದರ ಸಮರ

## ಮರಾಠಿಗರ ಮೇಲೆ ದೌರ್ಜನ್ಯ: ಸಾವಂತ್ | ರಾಜ್ಯ ಸಂಸದರ ತಿರುಗೇಟು

• **ಕನ್ನಡಪ್ರಭ ವಾರ್ತೆ** ನವದೆಹಲಿ 16/3/21

ಬೆಳಗಾವಿಯಲ್ಲಿ ಮರಾಠಿಗರ ಮೇಲೆ ಕನ್ನಡಿಗರು ದೌರ್ಜನ್ಯ ಎಸಗುತ್ತಿದ್ದು, ಕರ್ನಾಟಕದ ಮರಾಠಿ ಭಾಷಿಕ ಪ್ರದೇಶಗಳನ್ನು ಮಹಾರಾಷ್ಟ್ರಕ್ಕೆ ಸೇರಿಸಬೇಕೆಂದು ಮಹಾರಾಷ್ಟ್ರದ ಶಿವಸೇನೆ ಸಂಸದರು ಮತ್ತೆ ಸಂಸತ್ತಿನಲ್ಲಿ ಸೋಮವಾರ ಪ್ರಸ್ತಾಪಿಸಿದ್ದಾರೆ. ಅದಕ್ಕೆ ಕರ್ನಾಟಕದ ಸಂಸದರು ತಿರುಗೇಟು ನೀಡಿದ್ದು, ಮಹಾರಾಷ್ಟ್ರದ ಆಡಳಿತದಲ್ಲಿ ಅಸ್ಥಿರತೆ ಉಂಟಾದಾಗಲೆಲ್ಲ ಶಿವಸೇನೆ ಹೀಗೆ ಮಾಡುತ್ತದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.



ಅರವಿಂದ ಸಾವಂತ್

ಕೆಲ ದಿನಗಳಿಂದ ಮಹಾರಾಷ್ಟ್ರ ಹಾಗೂ ಕರ್ನಾಟಕದ ಗಡಿ ಭಾಗಗಳಲ್ಲಿ ಶಿವಸೇನೆ ಹಾಗೂ ಮಹಾರಾಷ್ಟ್ರ ಏಕೀಕರಣ ಸಮಿತಿಯ ಸದಸ್ಯರು ಗಡಿ ವಿಚಾರ ಕೆದಕಿ ಪುಂಡಾಟ ನಡೆಸುತ್ತಿದ್ದಾರೆ. ಸೋಮವಾರ ಅದನ್ನು ಲೋಕಸಭೆಗೂ ಕೊಂಡೊಯ್ದ ಶಿವಸೇನೆ ಸಂಸದ ಅರವಿಂದ ಸಾವಂತ್, 'ಬೆಳಗಾವಿ ಮುಂತಾದ ಮರಾಠಿ ಭಾಷಿಕರ ಪ್ರದೇಶಗಳಲ್ಲಿ ಕನ್ನಡದ ಹೋರಾಟಗಾರರು ಮರಾಠಿಗರ ಮೇಲೆ ದೌರ್ಜನ್ಯ ನಡೆಸುತ್ತಿದ್ದಾರೆ' ಎಂದು ಆರೋಪಿಸಿದರು.



ಉದಾಸಿ

ಸೋಮವಾರ ಶೂನ್ಯವೇಳೆಯಲ್ಲಿ ಮತ್ತೆ ಅದನ್ನು ಪ್ರಸ್ತಾಪಿಸಿದ ಅವರು, 'ಈ ವಿವಾದದಲ್ಲಿ ಕೇಂದ್ರ ಸರ್ಕಾರ ಮಧ್ಯಪ್ರವೇಶ ಮಾಡಬೇಕು. ಭಾಷೆಯ ವಿವಾದ ಇತ್ಯರ್ಥಕ್ಕೆ ಹೆಚ್ಚು ವಿಳಂಬ ಮಾಡಬಾರದು. ಅಲ್ಲಿಯವರೆಗೆ ಗಡಿ ಭಾಗಗಳಲ್ಲಿ ಶಾಂತಿ ಕಾಪಾಡುವುದು ಕರ್ನಾಟಕ ಸರ್ಕಾರದ ಹೊಣೆ' ಎಂದು ಹೇಳಿದರು.

ಅಲ್ಲದೆ, 'ಭಾಷಾವಾರು ರಾಜ್ಯಗಳು ರಚನೆಯಾದಾಗ ಮರಾಠಿ ಭಾಷಿಕ ಪ್ರದೇಶವಾದ ಬೆಳಗಾವಿ ಮಹಾರಾಷ್ಟ್ರದಿಂದ ಹೊರಗುಳಿಯಿತು' ಎಂದು ಆರೋಪಿಸಿದರು.

ಅದಕ್ಕೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದ ಕರ್ನಾಟಕದ ಹಾವೇರಿ ಕ್ಷೇತ್ರದ ಬಿಜೆಪಿ ಸಂಸದ ಶಿವಕುಮಾರ ಉದಾಸಿ, 'ಮಹಾರಾಷ್ಟ್ರದ ಆಡಳಿತದಲ್ಲಿ ಅಸ್ಥಿರತೆ ಉಂಟಾದಾಗಲೆಲ್ಲ ಅಲ್ಲಿನ ರಾಜಕೀಯ ಪಕ್ಷಗಳು ಜನರ ಗಮನ ಬೇರೆಡೆಗೆ ಸೆಳೆಯಲು ಗಡಿ ವಿವಾದ ಕೆದಕುತ್ತವೆ. ಈಗಲೂ ಅನವಶ್ಯಕವಾಗಿ ಈ ವಿಚಾರ ಪ್ರಸ್ತಾಪಿಸಲಾಗುತ್ತಿದೆ. ಗಡಿ ವಿವಾದ ಮಹಾಜನ್ ವರದಿಯೊಂದಿಗೇ ಅಂತ್ಯವಾಗಿದೆ. ಬೆಳಗಾವಿ ಕರ್ನಾಟಕಕ್ಕೆ ಸೇರಿದ್ದು ಎಂದು ಮಹಾಜನ್ ವರದಿಯಲ್ಲಿ ಸ್ಪಷ್ಟವಾಗಿ ಹೇಳಲಾಗಿದೆ' ಎಂದು ಹೇಳಿದರು. ಸಂಸದ ಪ್ರತಾಪ್ ಸಿಂಹ, ಕರಡಿ ಸಂಗಣ್ಣ, ದೇವೇಂದ್ರಪ್ಪ.

# ಸಂಸತ್ತಲ್ಲಿ ಉಡುಪಿ ಯುವತಿ ರಶ್ಮಿ ಪ್ರಕರಣ ಪ್ರತಿಧ್ವನಿ

## ಆಕ್ಸ್‌ಫರ್ಡ್ ವಿವಿಯಲ್ಲಿ ಜನಾಂಗೀಯ ನಿಂದನೆ: ಆಕ್ರೋಶ

**ನವದೆಹಲಿ:** ಇತ್ತೀಚೆಗೆ ಬ್ರಿಟನ್ನಿನ ಪ್ರಸಿದ್ಧ ಆಕ್ಸ್‌ಫರ್ಡ್ ವಿಶ್ವವಿದ್ಯಾಲಯದ ವಿದ್ಯಾರ್ಥಿ ಸಂಘಕ್ಕೆ ಮೊದಲ ಭಾರತೀಯ ಮೂಲದ ಅಧ್ಯಕ್ಷೆಯಾಗಿ ಆಯ್ಕೆಯಾಗಿದ್ದ ಉಡುಪಿ ಮೂಲದ ರಶ್ಮಿ ಸಾಮಂತ್ ಜನಾಂಗೀಯ ನಿಂದನೆಗೆ ಗುರಿಯಾಗಿ ರಾಜೀನಾಮೆ ನೀಡಬೇಕಾಗಿ ಬಂದ ಪ್ರಕರಣ ಸೋಮವಾರ ರಾಜ್ಯಸಭೆಯಲ್ಲಿ ಪ್ರತಿಧ್ವನಿಸಿತು. ವಿದೇಶಾಂಗ ಸಚಿವ ಎಸ್. ಜೈಶಂಕರ್ ಈ ಕುರಿತು ಪ್ರತಿಕ್ರಿಯಿಸಿ, ಅಗತ್ಯಬಿದ್ದಾಗ ಪ್ರಕರಣವನ್ನು ಬ್ರಿಟನ್ ಮುಂದೆ ಪ್ರಸ್ತಾಪಿಸಲಾಗುವುದು. ಮಹಾತ್ಮಗಾಂಧೀಜಿಯವರ ಭಾರತ ಜನಾಂಗೀಯ ನಿಂದನೆಯನ್ನು ಕಡೆಗಣಿಸುವ ಪ್ರಶ್ನೆಯೇ ಇಲ್ಲ ಎಂದು ಹೇಳಿದರು.





• **ರಾಜ್ಯಸಭೆಯಲ್ಲಿ ಪ್ರಸ್ತಾಪಿಸಿ ಕಿಡಿಕಾರಿದ ಸಂಸದ ಅಶ್ವಿನಿ ವೈಷ್ಣವ್**

• **ಅಗತ್ಯಬಿದ್ದಾಗ ಬ್ರಿಟನ್ ಜತೆ ಪ್ರಸ್ತಾಪ: ವಿದೇಶ ಸಚಿವ ಜೈಶಂಕರ್**

ಸಂಸದ ಅಶ್ವಿನಿ ವೈಷ್ಣವ್ ಈ ಪ್ರಕರಣವನ್ನು ಪ್ರಸ್ತಾಪಿಸಿ, ಉಡುಪಿಯ ಪ್ರತಿಭಾವಂತ ಹುಡುಗಿ ರಶ್ಮಿ ಆಕ್ಸ್‌ಫರ್ಡ್ ವಿವಿ ವಿದ್ಯಾರ್ಥಿ ಸಂಘಕ್ಕೆ ಮೊದಲ ಭಾರತೀಯ ಮಹಿಳೆಯಾಗಿ ಆಯ್ಕೆಯಾಗಿದ್ದಳು. ಆದರೆ, ಆಕೆಯನ್ನು ಆ ದೇಶ ನಡೆಸಿಕೊಂಡಿದ್ದು ಹೇಗೆ? ಆವಳ ಮೇಲೆ ಸೈಬರ್ ದಬ್ಬಾಳಿಕೆ ನಡೆಸಲಾಯಿತು. ಅವಳ ಹಿಂದು ಪೋಷಕರನ್ನೂ ಧಾರ್ಮಿಕವಾಗಿ ನಿಂದಿಸಲಾಯಿತು. ಅದರಿಂದಾಗಿ ಕೇವಲ 5 ದಿನಕ್ಕೆ ಆಕೆ ರಾಜೀನಾಮೆ ನೀಡಬೇಕಾಗಿ ಬಂದಿತು ಎಂದು ಕಿಡಿ ಕಾರಿದರು.

ಅದಕ್ಕೆ ಪ್ರತಿಕ್ರಿಯಿಸಿದ ಜೈಶಂಕರ್, ಬ್ರಿಟನ್ ಜೊತೆ ಭಾರತಕ್ಕೆ ಗಾಢ ಸಂಬಂಧವಿದೆ. ಹೀಗಾಗಿ ಅಗತ್ಯಬಿದ್ದಾಗ ಈ ಪ್ರಕರಣವನ್ನು ಸೂಕ್ತ ರೀತಿಯಲ್ಲಿ ಪ್ರಸ್ತಾಪಿಸಲಾಗುವುದು. ಬ್ರಿಟನ್‌ನಲ್ಲಿ ದೊಡ್ಡ ಸಂಖ್ಯೆಯಲ್ಲಿ ಭಾರತೀಯರು ನೆಲೆಸಿದ್ದಾರೆ. ಅಲ್ಲಿ ನಡೆಯುವ ಜನಾಂಗೀಯ ನಿಂದನೆಯನ್ನು ನಾವು ಕಡೆಗಣಿಸುವಂತಿಲ್ಲ ಎಂದು ಹೇಳಿದರು.

ಉಡುಪಿಯ ರಶ್ಮಿ, ಇತ್ತೀಚೆಗೆ ಆಕ್ಸ್‌ಫರ್ಡ್ ವಿಶ್ವವಿದ್ಯಾಲಯದ ವಿದ್ಯಾರ್ಥಿ ಒಕ್ಕೂಟದ ಅಧ್ಯಕ್ಷರಾಗಿ ಚುನಾಯಿತರಾಗಿದ್ದರು. ಈ ಹುದ್ದೆಗೆ ಏರಿದ ಮೊದಲ ಭಾರತೀಯ ಮಹಿಳೆ ಎನ್ನಿಸಿಕೊಂಡಿದ್ದರು. ಆದರೆ ಇವರು ಈ ಹುದ್ದೆಗೆ ಏರುವ ಮುನ್ನ ಜನಾಂಗೀಯ ನಿಂದನೆಗಳ ಟ್ವೀಟ್ ಮಾಡಿದ್ದರು ಎಂಬ ಆರೋಪ ಕೇಳಿಬಂದಿದ್ದವು. ಈ ಕಾರಣಕ್ಕೆ ಕೆಲ ದಿನದಲ್ಲಿ ಅವರು ರಾಜೀನಾಮೆ ನೀಡಿದ್ದರು.

**ಬ್ರಿಟನ್ ಸಚಿವರ ಜತೆ ಭೇಟಿ:** ಈ ನಡುವೆ, ಸೋಮವಾರ ಜೈಶಂಕರ್ ಅವರು ಬ್ರಿಟನ್ ಸಚಿವ ಲಾರ್ಡ್ ಅಹ್ಮದ್‌ರನ್ನು ಭೇಟಿಯಾದರು. ಈ ವೇಳೆ ರಶ್ಮಿ ವಿಚಾರ ಪ್ರಸ್ತಾಪ ಆಯಿತೇ ಎಂಬುದು ತಿಳುದುಬಂದಿಲ್ಲ.